ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

## ತಾಂತ್ರಿಕ ಶಿಕ್ಷಣ ಇಲಾಖೆಯ ನಡವಳಿಗಳು

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯ ಕಾರ್ಯಾಗಾರ ವಿಭಾಗದಲ್ಲಿನ ವಿವಿಧ ವಿಭಾಗಗಳ ಶಿಕ್ಷಕರು (ಬೋಧಕ) ಗಳಿಗೆ ಆಯಾ ವಿಭಾಗಗಳ ಫೋರ್‌ಮನ್ (ಉಳಿದ ಮೂಲ ವೃಂದದ) ಹುದ್ದೆಗೆ ಸ್ಥಾನಪನ್ನ ಮುಂಬಡ್ತಿ ನೀಡುವ ಬಗ್ಗೆ.

ಉಲ್ಲೇಖ:
1. ಈ ಕಛೇರಿ ಅಧಿಸೂಚನೆ ಸಂಖ್ಯೆ: ಡಿಟಿಇ/08/ಇಎಸ್‌ಟಿ(3)/2019, ದಿನಾಂಕ: 03.08.2019 ರಲ್ಲಿ ಪ್ರಕಟಿಸಲಾಗಿರುವ ತಾಂತ್ರಿಕ ಶಿಕ್ಷಣ ಇಲಾಖೆಯ ಶಿಕ್ಷಕರ ವೃಂದದ ಅಂತಿಮ ಜೇಷ್ಠತಾ ಪಟ್ಟಿ
2. ದಿನಾಂಕ: 02.11.2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಗಳು.
3. ಈ ಕಛೇರಿ ಜ್ಞಾಪನ ಸಂಖ್ಯೆ: DTE-ADMIOEST(4)/8/2021, ದಿನಾಂಕ: 27.12.2021

*****

ಪ್ರಸ್ತಾವನೆ:

ತಾಂತ್ರಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಕಾರ್ಯಾಗಾರ ವಿಭಾಗದಲ್ಲಿನ ವಿವಿಧ ವಿಭಾಗಗಳ ಫೋರ್‌ಮನ್ ಹುದ್ದೆಗಳಿಗೆ ಆಯಾ ವಿಭಾಗದ ಶಿಕ್ಷಕರು ಹುದ್ದೆಯಿಂದ ಶೇಕಡ 100 ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಲ್ಲೇಖ(1) ರಂತೆ ಪ್ರಕಟಿಸಲಾಗಿರುವ ತಾಂತ್ರಿಕ ಶಿಕ್ಷಣ ಇಲಾಖೆಯ ಶಿಕ್ಷಕರ ವೃಂದದ ಅಂತಿಮ ಜ್ಯೇಷ್ಠತಾ ಪಟ್ಟಿಯ ಅನುಸಾರ ಕಾರ್ಯಾಗಾರ ವಿಭಾಗದಲ್ಲಿನ ವಿವಿಧ ವಿಭಾಗಗಳ ಫೋರ್‌ಮನ್ ವೃಂದದಲ್ಲಿ ಖಾಲಿಯಿರುವ ಹುದ್ದೆಗಳನ್ನು ಸ್ಥಾನಪನ್ನ ಮುಂಬಡ್ತಿ ಮೂಲಕ ತುಂಬಬೇಕಾಗಿರುತ್ತದೆ. ದಿನಾಂಕ: 02.11.2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಖಾಲಿಯಿರುವ ವಿವಿಧ ವಿಭಾಗಗಳ ಫೋರ್‌ಮನ್ ಹುದ್ದೆಗಳನ್ನು ಜೇಷ್ಠತೆ ಹಾಗೂ ಅರ್ಹತೆ ಆಧಾರದ ಮೇಲೆ ಅರ್ಹ ಆಯಾ ವಿಭಾಗಗಳ ಶಿಕ್ಷಕರುಗಳಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ತೀರ್ಮಾನಿಸಲಾಗಿದೆ.

ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನದಂತೆ ಆಯಾ ವಿಭಾಗಗಳ ಶಿಕ್ಷಕರ ವೃಂದದಿಂದ ಆಯಾ ವಿಭಾಗಗಳ ಫೋರ್‌ಮನ್ ವೃಂದಕ್ಕೆ ಸ್ಥಾನಪನ್ನ ಬಡ್ತಿ ಹೊಂದಲು ಅರ್ಹರಿರುವ ಆಯಾ ವಿಭಾಗಗಳ ಶಿಕ್ಷಕರುಗಳಿಗೆ ಸ್ಥಳ ಸೂಚಿಸಲು ಉಲ್ಲೇಖ (3) ರಲ್ಲಿ ಅವಕಾಶ ಕಲ್ಪಿಸಲಾಗಿತ್ತು. ಅದರಂತೆ ಶಿಕ್ಷಕರುಗಳಿಗೆ ಫೋರ್‌ಮನ್ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿ ಆದೇಶ ಹೊರಡಿಸಬೇಕಾಗಿರುವುದರಿಂದ, ಈ ಕೆಳಕಂಡ ಆದೇಶ.

## ಆದೇಶ ಸಂಖ್ಯೆ: DTE-ADMIOEST(4)/8/2021, ದಿನಾಂಕ: 31.12.2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ಈ ಕೆಳಕಂಡ ವಿವಿಧ ವಿಭಾಗಗಳ ಶಿಕ್ಷಕರುಗಳಿಗೆ ಗ್ರೂಪ್-ಸಿ ವೃಂದದ ರಾಜ್ಯ ವೇತನ ಶ್ರೇಣಿ ರೂ. 37900-950-39800-1100-46400-1250-53900-1450-62600-1650-70850 ರಲ್ಲಿನ ಆಯಾ ವಿಭಾಗಗಳ ಫೋರ್‌ಮನ್ ಹುದ್ದೆಗೆ ತಾತ್ಕಾಲಿಕವಾಗಿ ಹಾಗೂ ಮುಂದಿನ ಆದೇಶದವರೆಗೆ ಸ್ಥಾನಪನ್ನ ಬಡ್ತಿ ನೀಡಿ ಅವರ ಹೆಸರಿನ ಮುಂದೆ ಸೂಚಿಸಿರುವ ಖಾಲಿ ಹುದ್ದೆಗೆ ಎದುರಾಗಿ ಈ ಕೂಡಲೇ ಜಾರಿಗೆ ಬರುವಂತೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

## ಉಳಿದ ಮೂಲ ವೃಂದ

| ಕ್ರ ಸಂ | ಶಿಕ್ಷಕರ ಹೆಸರು | ಕಾರ್ಯನಿರ್ವಹಿಸುತ್ತಿರುವ ಕಛೇರಿ / ಸಂಸ್ಥೆ | ಫೋರ್‌ಮನ್ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿಗೊಳಿಸಲಾದ ಸಂಸ್ಥೆ | ಷರಾ |
|---|---|---|---|---|
| ಸಿವಿಲ್ ಇಂಜಿನಿಯರಿಂಗ್ | | | | |
| 1. | ಜಯಪ್ರಕಾಶ್ ಸಿಂಗ್ ಕೆ. | ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು | ಸರ್ಕಾರಿ ಎಸ್.ಕೆ.ಎಸ್.ಜೆ.ಟಿ.ಐ ಸಂಸ್ಥೆ, ಬೆಂಗಳೂರು | ಖಾಲಿ ಹುದ್ದೆಗೆ ಎದುರಾಗಿ |
| 2. | ರಾಜೇಶ್ ವಿ.ಶೇಠ್ | ಸರ್ಕಾರಿ ಎಸ್.ಕೆ.ಎಸ್.ಜೆ.ಟಿ. ಸಂಸ್ಥೆ, ಬೆಂಗಳೂರು | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ | ಖಾಲಿ ಹುದ್ದೆಗೆ ಎದುರಾಗಿ |
| 3. | ಲಿಂಗರಾಜು ಎ. | ಸರ್ಕಾರಿ ಎಸ್.ಕೆ.ಎಸ್.ಜೆ.ಟಿ. ಸಂಸ್ಥೆ, ಬೆಂಗಳೂರು | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕೆ.ಆರ್.ಪೇಟೆ | ಖಾಲಿ ಹುದ್ದೆಗೆ ಎದುರಾಗಿ |
| 4. | ಬಸವರಾಜು ಅಡೂರು | ಸರ್ಕಾರಿ ಪಾಲಿಟೆಕ್ನಿಕ್, ಕಾರಟಗಿ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹೂವಿನಹಡಗಲಿ | ಖಾಲಿ ಹುದ್ದೆಗೆ ಎದುರಾಗಿ |
| 5. | ಸಂಜಯ್ ಎಸ್. | ಸರ್ಕಾರಿ ಪಾಲಿಟೆಕ್ನಿಕ್, ಚಾಮರಾಜನಗರ | ಸರ್ಕಾರಿ ಪಾಲಿಟೆಕ್ನಿಕ್, ಚಾಮರಾಜನಗರ | ಖಾಲಿ ಹುದ್ದೆಗೆ ಎದುರಾಗಿ |
| 6. | ಲಿಂಗರಾಜು ಎಸ್.ಪಿ. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಾಮರಾಜನಗರ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ | ಖಾಲಿ ಹುದ್ದೆಗೆ ಎದುರಾಗಿ |
| ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಷನ್ | | | | |
| 1. | ಟಿ.ಎಂ. ಕುಲಕರ್ಣಿ | ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು | ಸರ್ಕಾರಿ ಎಸ್.ಕೆ.ಎಸ್.ಜೆ.ಟಿ.ಐ ಸಂಸ್ಥೆ, ಬೆಂಗಳೂರು | ಖಾಲಿ ಹುದ್ದೆಗೆ ಎದುರಾಗಿ |
| 2. | ಬಸವರಾಜಸ್ವಾಮಿ ಎಂ. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಾಮರಾಜನಗರ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಾಮರಾಜನಗರ | ಖಾಲಿ ಹುದ್ದೆಗೆ ಎದುರಾಗಿ |
| 3. | ಆನಂದ ಜಿ. | ಸರ್ಕಾರಿ ಪಾಲಿಟೆಕ್ನಿಕ್, ಇಮ್ಮಡಿಹಳ್ಳಿ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ | ಖಾಲಿ ಹುದ್ದೆಗೆ ಎದುರಾಗಿ |
| 4. | ಬಾಲಚಂದ್ರ ಹೆಬ್ಬಾರ್ | ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಕಾರ್ಕಳ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಾರವಾರ | ಖಾಲಿ ಹುದ್ದೆಗೆ ಎದುರಾಗಿ |
| 5. | ಗೋವಿಂದರಾಜು ಎಂ.ಎನ್. | ಸರ್ಕಾರಿ ಪಾಲಿಟೆಕ್ನಿಕ್, ಹೊಳೆನರಸೀಪುರ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕೆ.ಆರ್.ಪೇಟೆ | ಖಾಲಿ ಹುದ್ದೆಗೆ ಎದುರಾಗಿ |
| ಆಟೋ ಮೊಬೈಲ್ | | | | |
| 1. | ಬಿ. ಶಿವಮೂರ್ತಿ | ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು | ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು | ಖಾಲಿ ಹುದ್ದೆಗೆ ಎದುರಾಗಿ |
| 2. | ಬಿ.ಎಂ. ಮಂಜುನಾಥ್ | ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು | ಸರ್ಕಾರಿ ಪಾಲಿಟೆಕ್ನಿಕ್, ತುಮಕೂರು | ಖಾಲಿ ಹುದ್ದೆಗೆ ಎದುರಾಗಿ |
| ಎಲೆಕ್ಟ್ರಿಕಲ್ | | | | |
| 1. | ಪರಮೇಶ್ವರಪ್ಪ ಎನ್.ಆರ್. | ಸರ್ಕಾರಿ ವಿ.ಐ.ಎಸ್.ಎಸ್.ಜೆ. ಪಾಲಿಟೆಕ್ನಿಕ್, ಭದ್ರಾವತಿ | ಎಸ್.ಜೆ.ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು | ಖಾಲಿ ಹುದ್ದೆಗೆ ಎದುರಾಗಿ |

ಮುಂಬಡ್ತಿ ಹೊಂದಿದ ಸಿಬ್ಬಂದಿಗಳು ಸ್ಥಾನಪನ್ನ ಮುಂಬಡ್ತಿ ಹುದ್ದೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 19(ಸಿ)ರ ಪ್ರಕಾರ ಒಂದು ವರ್ಷದ ಸ್ಥಾನಪನ್ನ ಅವಧಿಯನ್ನು ತೃಪ್ತಿಕರವಾಗಿ ಪೂರೈಸುವ ಷರತ್ತಿಗೊಳಪಟ್ಟಿದೆ.

ಬಡ್ತಿ ಹೊಂದಿರುವ ಶಿಕ್ಷಕರುಗಳು ಆದೇಶದ ಪ್ರತಿಯನ್ನು ಇಲಾಖಾ ವೆಬ್‌ಸೈಟ್‌ನಿಂದ ಪಡೆದು ಸ್ಥಳನಿಯುಕ್ತಿಗೊಳಿಸಲಾದ ಸಂಸ್ಥೆಯಲ್ಲಿ ಈ ಆದೇಶ ತಲುಪಿದ 15 ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳತಕ್ಕದ್ದು, ತಪ್ಪಿದಲ್ಲಿ ಬಡ್ತಿಯು ಸ್ವಯಂಚಾಲಿತವಾಗಿ ರದ್ದಾಗುತ್ತದೆ

ಬಡ್ತಿ ಹೊಂದಿರುವ ಶಿಕ್ಷಕರುಗಳ ಪೈಕಿ ಯಾರಾದರೂ ಪ್ರಸ್ತುತ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ, ಸದರಿ ನಿಯೋಜನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿದೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಇವರಿಗೆ:-

1. ಸಂಬಂಧಪಟ್ಟ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ;
2. ಸಂಬಂಧಪಟ್ಟ ಶಿಕ್ಷಕರುಗಳಿಗೆ(ಸಂಬಂಧಿಸಿದ ಪ್ರಾಂಶುಪಾಲರ ಮೂಲಕ);
3. ತಾಂತ್ರಿಕ ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ;
4. ನೋಡಲ್ ಅಧಿಕಾರಿ, ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು (ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು).

ಪ್ರತಿ:-

1. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ಶಾಖಾ ರಕ್ಷಾ ಕಡತ.